**ಕರ್ನಾಟಕ ಸರ್ಕಾರ**

**ಕಾಲೇಜು ಶಿಕ್ಷಣ ಇಲಾಖೆ**

ದೂರವಾಣಿ: 080-22343904/05

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು-560001.

ಸಂಖ್ಯೆ: ಕಾಶಿಇ/ಶೈವಿ/22/ಸುತ್ತೋಲೆ/2018-19

ದಿನಾಂಕ: 27.07.2018.

# ಸುತ್ತೋಲೆ

ವಿಷಯ: ಗಾಂಧಿ ವಿಚಾರ ಸಂಸ್ಕಾರ ಪರೀಕ್ಷೆಯಲ್ಲಿ ವಿದ್ಯಾರ್ಥಿಗಳು ಭಾಗವಹಿಸುವ ಬಗ್ಗೆ.

ಉಲ್ಲೇಖ: ಅಧ್ಯಕ್ಷರು, ಕರ್ನಾಟಕ ಗಾಂಧೀ ಸ್ಮಾರಕ ನಿಧಿ ರವರ ಪತ್ರ ಸಂಖ್ಯೆ: ಕೆಜಿಎಸ್ಎನ್/626/2018-19/58 ದಿನಾಂಕ:18.06.2018.

* * * * * *

ಮಹಾತ್ಮಾಗಾಂಧಿ ಅವರ 150ನೇ ಜನ್ಮ ದಿನಾಚರಣೆಯ ಅಂಗವಾಗಿ ಮಹಾತ್ಮಾಗಾಂಧಿ ಅವರ ವಿಚಾರಗಳನ್ನು ನಾಡಿನ ವಿದ್ಯಾರ್ಥಿಗಳ ಮನದಲ್ಲಿ ಸತ್ಯ ಅಹಿಂಸೆ, ಸಮಾನತೆ, ಸರ್ವೋದಯದ ಭಾವನೆಗಳನ್ನು ಪೋಷಿಸಲು ಮತ್ತು ಉತ್ತೇಜಿಸಲು ಹಾಗೂ ಇಂದಿನ ಆಧುನಿಕ ಜಗತ್ತಿನಲ್ಲಿ ಮಾನವೀಯ ಮೌಲ್ಯಗಳನ್ನು ವಿದ್ಯಾರ್ಥಿಗಳಲ್ಲಿ, ಯುವಜನರಲ್ಲಿ ಹಾಗೂ ಸಾರ್ವಜನಿಕರಲ್ಲಿ ಬಿತ್ತುವ ಉದ್ದೇಶದಿಂದ ಮಹಾರಾಷ್ಟ್ರದ ಜಲಗಾವ್‌ನ ಗಾಂಧೀ ರಿಸರ್ಚ್ ಫೌಂಡೇಶನ್, ಅವರು **"ಗಾಂಧೀ ವಿಚಾರ ಸಂಸ್ಕಾರ ಪರೀಕ್ಷೆ"**ಯನ್ನು ವಿಶ್ವದಾದ್ಯಂತ ನಡೆಸಲು ಉದ್ದೇಶಿಸಿರುತ್ತಾರೆ. ಕರ್ನಾಟಕದಲ್ಲಿ ಕರ್ನಾಟಕ ಗಾಂಧೀ ಸ್ಮಾರಕ ನಿಧಿ ಇವರು ಸದರಿ ಕಾರ್ಯಕ್ರಮವನ್ನು ರಾಜ್ಯಾದ್ಯಂತ ಶಿಕ್ಷಣ ಸಂಸ್ಥೆಗಳಲ್ಲಿ ನಡೆಸುವ ಸಂಬಂಧ ಮನವಿ ಸಲ್ಲಿಸಿರುತ್ತಾರೆ.

ಪದವಿ ಹಾಗೂ ಸ್ನಾತಕೋತ್ತರ ವಿದ್ಯಾರ್ಥಿಗಳಗಾಗಿ ಪರೀಕ್ಷೆಯು ತಾಲ್ಲೂಕು, ಜಿಲ್ಲೆ ಮತ್ತು ಸಂಸ್ಥೆಗಳ ಮಟ್ಟದಲ್ಲಿ ನಡೆಯಲಿದ್ದು, ಈ ಪರೀಕ್ಷೆಗೆ ನೋಂದಾಯಿಸಿಕೊಂಡ ವಿದ್ಯಾರ್ಥಿಗಳಿಗೆ ಪುಸ್ತಕಗಳನ್ನು ರಿಯಾಯಿತಿ ದರದಲ್ಲಿ ನೀಡಲಾಗುತ್ತದೆ. ವಿದ್ಯಾರ್ಥಿಗಳು ಆ ಪುಸ್ತಕಗಳನ್ನು ಓದಿ, ನಿಗಧಿಪಡಿಸಿದ ದಿನಾಂಕದಂದು ಒಂದು ಗಂಟೆ ಅವಧಿಯ ಪರೀಕ್ಷೆಯನ್ನು ಬರೆಯಬೇಕಾಗುತ್ತದೆ.

ಈ ಸಂಬಂಧ, ರಾಜ್ಯದ ಎಲ್ಲಾ ಸರ್ಕಾರಿ / ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಸದರಿ ಪರೀಕ್ಷೆಗೆ ವಿದ್ಯಾರ್ಥಿಗಳು ಭಾಗವಹಿಸುವ ಸಂಬಂಧ ಈ ಸುತ್ತೋಲೆಯನ್ನು ಸೂಚನಾ ಫಲಕದಲ್ಲಿ ಪ್ರದರ್ಶಿಸುವಂತೆ ಹಾಗೂ ಕರ್ನಾಟಕ ಗಾಂಧಿ ಸ್ಮಾರಕ ನಿಧಿ ಇವರ ಮಾರ್ಗದರ್ಶನದಲ್ಲಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಸೂಚಿಸಲಾಗಿದೆ.

**ಕಾಲೇಜು ಶಿಕ್ಷಣ ಹೆಚ್ಚುವರಿ ನಿರ್ದೇಶಕರು**

<u>ಇವರಿಗೆ:</u>

1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಕಲಬುರಗಿ - ತಮ್ಮ ವ್ಯಾಪ್ತಿಗೆ ಬರುವ ಎಲ್ಲಾ ಸರ್ಕಾರಿ/ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ರವಾನಿಸಲು ಸೂಚಿಸಲಾಗಿದೆ.
2. ರಾಜ್ಯದ ಎಲ್ಲಾ ಸರ್ಕಾರಿ, ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ (ಪ್ರಾದೇಶಿಕ ಜಂಟಿ ನಿರ್ದೇಶಕರ ಮುಖಾಂತರ) - ಅಗತ್ಯ ಕ್ರಮಕ್ಕಾಗಿ.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು - ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.
4. ಕಛೇರಿ ಪ್ರತಿ.